Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

27.05.2025 18.40 hrs

<><*<><>*><>

## ಮುಖ್ಯಾಂಶಗಳು

- ರಾಜ್ಯದಲ್ಲಿ ಕನ್ನಡ ಶಾಲೆ, ಕನ್ನಡ ಭಾಷೆ ಉಳಿವಿಗೆ ಬದ್ಧ - ಸರ್ಕಾರ ಸ್ಪಷ್ಟನೆ
- ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲೂ ಕೊರೋನಾ ಚಿಕಿತ್ಸೆ - ಸಚಿವ ಶರಣ್ ಪ್ರಕಾಶ್ ಪಾಟೀಲ್
- ಎಚ್‌ಎಎಲ್ ಸೇರಿದಂತೆ ರಾಜ್ಯದ ಆಸ್ತಿ ರಕ್ಷಣೆ ಮಾಡುವುದು ಸರ್ಕಾರದ ಕರ್ತವ್ಯ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
- ಪಕ್ಷ ವಿರೋಧಿ ಚಟುವಟಿಕೆ ಹಿನ್ನೆಲೆ ; ಶಾಸಕರಾದ ಎಸ್.ಟಿ. ಸೋಮಶೇಖರ್, ಶಿವರಾಮ್ ಹೆಬ್ಬಾರ್ ಉಚ್ಚಾಟನೆ
- ರಾಜ್ಯದ ವಿವಿಧೆಡೆ ಮಳೆ ; ಶಿವಮೊಗ್ಗದಲ್ಲಿ ಅಪಾರ ಪ್ರಮಾಣದ ಭತ್ತದ ಬೆಳೆ ನಾಶ

<><*<><>*><>

ರಾಜ್ಯದಲ್ಲಿ ಕನ್ನಡದ ಉಳಿವಿಗೆ ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಕನ್ನಡ ಭಾಷೆಯನ್ನು ನಿರ್ಲಕ್ಷಿಸಿ ಉರ್ದು ಭಾಷೆಗೆ ಸರ್ಕಾರ ಹೆಚ್ಚಿನ ಅನುದಾನ ನೀಡುತ್ತಿದೆ ಎಂಬ ಆರೋಪವನ್ನು ತಳ್ಳಿ ಹಾಕಿದ್ದಾರೆ. ಪ್ರಸಕ್ತ ಸಾಲಿನಲ್ಲಿ ರಾಜ್ಯ ಸರ್ಕಾರವು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಗೆ ಒಟ್ಟು ೩೬ ಸಾವಿರದ ೬೮೮ ಕೋಟಿ ರೂಪಾಯಿಗಳ ಅನುದಾನ ನೀಡಿದೆ. ಕನ್ನಡ ಭಾಷೆಗಾಗಿ ಕೇವಲ ೩೨ ಕೋಟಿ ರೂಪಾಯಿ ನೀಡಲಾಗಿದೆ ಎಂಬ ಆರೋಪ ಮಾಡಿರುವ ಬಿಜೆಪಿ ರಾಜ್ಯದ ಜನತೆಯ ಕ್ಷಮೆ ಕೇಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರಿಕಾ ಪ್ರಕಟಣೆ ಮೂಲಕ ಆಗ್ರಹಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ಕೊರೊನಾ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ವೈದ್ಯರು, ಆರೋಗ್ಯ ಸಿಬ್ಬಂದಿ ಮಾಸ್ಕ್ ಧರಿಸಲು ಸೂಚಿಸಲಾಗಿದೆ. ಜನರು ಆತಂಕ ಪಡುವ ಅಗತ್ಯವಿಲ್ಲ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ್ ಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನ ವಿಕಾಸಸೌಧದಲ್ಲಿ ಕೋವಿಡ್ ಮುನ್ನೆಚ್ಚರಿಕಾ ಸಭೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೋವಿಡ್ ಬಗ್ಗೆ ಹೆಚ್ಚು ಆತಂಕ ಪಡುವ ಅಗತ್ಯವಿಲ್ಲ. ಗರ್ಭಿಣಿಯರು ಮಾಸ್ಕ್ ಬಳಕೆ ಮಾಡಬೇಕು. ಸಾರಿ ಕೇಸ್‌ಗಳ ಪರೀಕ್ಷೆ ಮಾಡಬೇಕು ಎಂದು ಸೂಚಿಸಿದ್ದಾರೆ. ವೈದ್ಯಕೀಯ ಶಿಕ್ಷಣ ಇಲಾಖೆಯ ಎಲ್ಲ ಆಸ್ಪತ್ರೆಯ ನಿರ್ದೇಶಕರೊಂದಿಗೆ ಸಭೆ ನಡೆಸಿದ್ದು, ಪ್ರಯೋಗಾಲಯ ವ್ಯವಸ್ಥೆ, ಆಕ್ಸಿಜನ್ ಬೆಡ್, ವೆಂಟಿಲೇಟರ್ ಬಗ್ಗೆ ಮಾಹಿತಿ ತಿಳಿಸಲು ಸೂಚಿಸಲಾಗಿದೆ ಎಂದು ಹೇಳಿದ್ದಾರೆ. ಮಾಸ್ಕ್ ಕಡ್ಡಾಯ ಮಾಡುವ ಅವಶ್ಯಕತೆ ಸದ್ಯಕ್ಕೆ ಇಲ್ಲ ಎಂದು ಸಚಿವರು ತಿಳಿಸಿದ್ದಾರೆ.

<><*<><>*><>

ವಿದ್ಯಾರ್ಥಿಗಳು ಚಿಕ್ಕಂದಿನಿಂದಲೇ ದೇಶಾಭಿಮಾನ ಹಾಗೂ ಪರಿಸರ ಪ್ರೇಮವನ್ನು ಬೆಳೆಸಿಕೊಳ್ಳುವಂತೆ ನ್ಯಾಯಮೂರ್ತಿ ಹಾಗೂ ಉಪಲೋಕಾಯುಕ್ತ ಬಿ.ವೀರಪ್ಪ ಸಲಹೆ ನೀಡಿದ್ದಾರೆ. ಮಂಡ್ಯದಲ್ಲಿ ಮಾತನಾಡಿದ ಅವರು, ಕರಿಘಟ್ಟ ಬೆಟ್ಟದಲ್ಲಿ ಕಾಡಿನ ಮರಗಳಿಗೆ ಬೆಂಕಿ ಹಾಕಿದರೆ ಮಕ್ಕಳಾಗುತ್ತದೆ

ಎಂಬ ಮೂಢನಂಬಿಕೆಯಿಂದ ಸಾರ್ವಜನಿಕರು ಹೊರಬರಬೇಕು. ಕಾಡಿನ ಮರಗಳಿಗೆ ಬೆಂಕಿ ಹಾಕುವ ಕೃತ್ಯ ಕಂಡುಬಂದಲ್ಲಿ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಿ ಎಂದು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಧ್ವನಿ : ಉಪಲೋಕಾಯುಕ್ತರಾದ ಬಿ.ವೀರಪ್ಪ ( ೨೦ ಸೆಕೆಂಡ್ಸ್)

**<><*<><>*><>**

ಇತರೆ ಪತ್ರಿಕಾ ಸಂಸ್ಥೆಗಳು ಪ್ರೆಸ್ ಕೌನ್ಸಿಲ್ ಹಾಗೂ ಪತ್ರಿಕಾ ಮಂಡಳಿಯ ಹೆಸರು ಮತ್ತು ಲಾಂಛನ ಬಳಸದಂತೆ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯ ಸೂಚನೆ ನೀಡಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಅನುಮತಿಯಿಲ್ಲದೇ ಪ್ರೆಸ್ ಕೌನ್ಸಿಲ್ ಅಥವಾ ಭಾರತೀಯ ಪ್ರೆಸ್ ಪರಿಷದ್ ಎಂಬ ಹೆಸರನ್ನು ಹೊಂದಿರುವ ಯಾವುದೇ ಸ್ಥಳೀಯ ಅಥವಾ ಸರ್ಕಾರಿ ಸಂಘ ಸಂಸ್ಥೆಯ ನೋಂದಣಿಯನ್ನು ನಿಷೇಧಿಸುವುದು ಅಥವಾ ಸರಿಪಡಿಸಲು ಅಗತ್ಯ ಸಲಹೆ ನೀಡುವಂತೆ ಸಚಿವಾಲಯದ ಕಾರ್ಯದರ್ಶಿ ಸಂಜಯ್ ಜಾಜೂ ಎಲ್ಲ ರಾಜ್ಯಗಳ ಮುಖ್ಯ ಕಾರ್ಯದರ್ಶಿಗಳಿಗೆ ಸೂಚಿಸಿದ್ದಾರೆ.

**<><*<><>*><>**

ಎಚ್.ಎ.ಎಲ್. ಸೇರಿದಂತೆ ರಾಜ್ಯದ ಆಸ್ತಿಗಳನ್ನು ಸರ್ಕಾರ ರಕ್ಷಣೆ ಮಾಡಿಕೊಳ್ಳಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರು ಕೇಂದ್ರ ಸರ್ಕಾರಕ್ಕೆ ನೀಡಿರುವ ಮನವಿ ಬಗ್ಗೆ ಹಸ್ತಕ್ಷೇಪ ಮಾಡುವುದಿಲ್ಲ ಎಂದು ಹೇಳಿದ್ದಾರೆ. ಇದೇ ವೇಳೆ ಕಲಬುರಗಿ ಜಿಲ್ಲಾಧಿಕಾರಿಯನ್ನು ನಿಂದಿಸಿರುವ ಬಿಜೆಪಿ ಪರಿಷತ್ ಸದಸ್ಯ ರವಿಕುಮಾರ್ ಪ್ರಕರಣವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ ಎಂದು ತಿಳಿಸಿದ್ದಾರೆ.

**<><*<><>*><>**

ಪಕ್ಷ ವಿರೋಧಿ ಚಟುವಟಿಕೆಯಲ್ಲಿ ಭಾಗಿಯಾಗಿರುವ ಆರೋಪದ ಮೇಲೆ ಶಾಸಕರಾದ ಎಸ್.ಟಿ ಸೋಮಶೇಖರ್ ಮತ್ತು ಶಿವರಾಂ ಹೆಬ್ಬಾರ್ ಅವರನ್ನು ೬ ವರ್ಷಗಳ ಕಾಲ ಬಿಜೆಪಿಯಿಂದ ಉಚ್ಚಾಟನೆ ಮಾಡಲಾಗಿದೆ. ಈ ಉಭಯ ನಾಯಕರು ಕಾಂಗ್ರೆಸ್ ಪಕ್ಷದೊಂದಿಗೆ ಗುರುತಿಸಿಕೊಂಡಿದ್ದರು ಎಂಬ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿ ಬಿಜೆಪಿ ಕೇಂದ್ರೀಯ ಶಿಸ್ತು ಸಮಿತಿ ಈ ನಿರ್ಧಾರ ಕೈಗೊಂಡಿದೆ. ೨ ತಿಂಗಳ ಹಿಂದಷ್ಟೇ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ೬ ವರ್ಷಗಳ ಕಾಲ ಬಿಜೆಪಿಯಿಂದ ಉಚ್ಚಾಟನೆ ಮಾಡಲಾಗಿತ್ತು.

**<><*<><>*><>**

ಮಳೆ ಹಾನಿ ಹಾಗೂ ಭೂಕುಸಿತ ಉಂಟಾಗಿರುವ ಹಾಸನ ಜಿಲ್ಲೆಯ ಸಕಲೇಶಪುರ ತಾಲೂಕಿನ ವಿವಿಧ ಪ್ರದೇಶಗಳಿಗೆ ವಿಪಕ್ಷ ನಾಯಕ ಆರ್. ಅಶೋಕ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತಾಡಿದ ಅವರು, ಸರ್ಕಾರ ನಿರ್ಲಕ್ಷ್ಯ ನಡೆ ಅನುಸರಿಸುತ್ತಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಮನೆ ಕಳೆದುಕೊಂಡವರಿಗೆ ತಕ್ಷಣವೇ ೫ ಲಕ್ಷ ರೂಪಾಯಿ ಪರಿಹಾರ ಘೋಷಿಸಬೇಕು. ಕಾಳಜಿ ಕೇಂದ್ರಗಳನ್ನು ತೆರೆಯಬೇಕು," ಎಂದು ಆರ್. ಅಶೋಕ ಆಗ್ರಹಿಸಿದ್ದಾರೆ.

**<><*<><>*><>**

ರಾಜ್ಯದ ಹಲವೆಡೆ ಮಳೆ ಮುಂದುವರೆದಿದೆ. ಕೊಡಗು, ದಕ್ಷಿಣ ಕನ್ನಡ, ಉಡುಪಿ, ಉತ್ತರಕನ್ನಡ ಜಿಲ್ಲೆಗಳಲ್ಲಿ ಮಳೆ ಸುರಿಯುತ್ತಿದ್ದು, ನದಿ, ಕೊಳ್ಳಗಳು ತುಂಬಿ ಹರಿಯುತ್ತಿವೆ. ಮಹಾರಾಷ್ಟ್ರದಾದ್ಯಂತ ಧಾರಾಕಾರ ಮಳೆಯಾಗುತ್ತಿದ್ದು, ಕೃಷ್ಣಾ ನದಿ ನೀರಿನ ಪ್ರಮಾಣದಲ್ಲಿ ಹೆಚ್ಚಳವಾಗಿದೆ. ಈ ಹಿನ್ನೆಲೆಯಲ್ಲಿ ನದಿ ಪಾತ್ರದ ಜನರು ಎಚ್ಚರಿಕೆಯಿಂದ ಇರುವಂತೆ ಬೆಳಗಾವಿ ಜಿಲ್ಲಾಡಳಿತ ಸೂಚನೆ ನೀಡಿದೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಗಾಳಿ ಮಳೆ ಮುಂದುವರೆದಿದೆ. ಗಾಳಿಯಿಂದ ಚಿಕ್ಕಮಗಳೂರು - ಲಿಂಗದಹಳ್ಳಿ ರಸ್ತೆಯಲ್ಲಿ ಬೃಹತ್ ಮರಗಳು, ವಿದ್ಯುತ್ ಕಂಬಗಳು ಉರುಳಿದ್ದು ಹಲವು ಗ್ರಾಮಗಳಿಗೆ ವಿದ್ಯುತ್ ಸಮಸ್ಯೆ ಉಂಟಾಗಿದೆ.  ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ಕೆಲವು ದಿನಗಳಿಂದ ಭಾರೀ ಮಳೆಯಾಗಿದ್ದು, ಇಂದು ಕಡಿಮೆಯಾಗಿದೆ. ಆದರೆ ಕಡಲು ಪ್ರಕ್ಷುಬ್ಧವಾಗಿದ್ದು, ಮಂಗಳೂರು ಹೊರವಲಯದ ಉಳ್ಳಾಲ, ಸೋಮೇಶ್ವರ, ಉಚ್ಚಿಲ ಪ್ರದೇಶದಲ್ಲಿ ಕಡಲ್ಕೊರೆತ ತೀವ್ರಗೊಂಡಿದೆ. ಸೋಮೇಶ್ವರ-ಉಚ್ಚಿಲ ಬಟ್ಟಪ್ಪಾಡಿ ಸಂಪರ್ಕದ ಬೀಚ್ ರಸ್ತೆ ಸಮುದ್ರ ಪಾಲಾಗುವ ಆತಂಕ ಎದುರಾಗಿದೆ.  ಶಿವಮೊಗ್ಗದಲ್ಲಿ ಸುರಿಯುತ್ತಿರುವ ನಿರಂತರ ಮಳೆ ಹಿನ್ನಲೆಯಲ್ಲಿ ಅನ್ನದಾತನ ಪಾಡು ಕೇಳುವವರೇ ಇಲ್ಲದಂತಾಗಿದೆ. ಕಟಾವಿಗೆ ಬಂದ ಭತ್ತದ ಬೆಳೆ ಗದ್ದೆಯಲ್ಲೇ ನಾಶವಾಗುತ್ತಿದೆ. ನಿರಂತರ ಮಳೆಯಿಂದ ಗದ್ದೆಯಲ್ಲೇ ಭತ್ತದ ಪೈರು ಮೊಳಕೆ ಒಡೆದಿದೆ. ಸರ್ಕಾರ ಪರಿಹಾರ ನೀಡುವಂತೆ ರೈತರು ಮನವಿಮಾಡಿದ್ದಾರೆ. ಪ್ರಸಕ್ತ ಸಾಲಿನಲ್ಲಿ ಮುಂಗಾರು ಮಳೆ ಅವಧಿಗೂ ಮುನ್ನವೆ ಆರಂಭವಾಗಿದ್ದು ರಾಜ್ಯದಲ್ಲಿನ ಜಲಾಶಯಗಳು ಭರ್ತಿಯಾಗುತ್ತಿದ್ದು, ಕೊಪ್ಪಳ ಜಿಲ್ಲೆಯ ಮುನಿರಾಬಾದ್ ಗ್ರಾಮದಲ್ಲಿನ ತುಂಗಭದ್ರಾ ಜಲಾಶಯದಲ್ಲಿ ೧೨ ಟಿಎಂಸಿ ನೀರು ಸಂಗ್ರಹವಾಗಿದೆ. ಮುಂಗಾರು ಹಂಗಾಮಿಗೆ ಜಲಾಶಯದ ವ್ಯಾಪ್ತಿಯಲ್ಲಿನ ರೈತರು ಭತ್ತದ ನಾಟಿಗೆ ಸಿದ್ಧತೆ ಮಾಡಿಕೊಂಡಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಹೆಚ್ಚಿನ ಮಳೆಯಾಗುತ್ತಿರುವ ಹಿನ್ನಲೆಯಲ್ಲಿ ಯಾವುದೇ ರೀತಿಯ ಜೀವಹಾನಿ ಆಗಬಾರದು ಹಾಗೂ  ಜಾನುವಾರುಗಳನ್ನು ರಕ್ಷಿಸಲು ಸಲುವಾಗಿ ಜಿಲ್ಲೆಯಲ್ಲಿ ಸಹಾಯವಾಣಿ ತೆರೆಯಲಾಗಿದೆ. ನಾಗರಿಕರು ಹೆಚ್ಚಿನ ಮಾಹಿತಿಗೆ ವರುಣ ಮಿತ್ರ ಸಹಾಯವಾಣಿ ಸಂಖ್ಯೆ ೯೨೪೩೩೪೫೪೩೩ ಗೆ ಕರೆ ಮಾಡಬಹುದು. ಇಂದು ಕರಾವಳಿ ಮಲೆನಾಡು ಜಿಲ್ಲೆಗಳಲ್ಲಿ ಗುಡುಗು-ಮಿಂಚು ಸಹಿತ ಅತ್ಯಧಿಕ ಮಳೆಯಾಗುವ ಸಾಧ್ಯತೆಯಿದ್ದು, ಹವಾಮಾನ ಇಲಾಖೆ ರೆಡ್ ಅಲರ್ಟ್ ಘೋಷಿಸಿದೆ.

<><*<><>*><>

ಬಡವರು, ಕೂಲಿಕಾರರು ಹಸಿವಿನಿಂದ ಬಳಲಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದಲ್ಲಿ ೧೬೦ ಇಂದಿರಾ ಕ್ಯಾಂಟಿನ್‌ಗಳನ್ನು ಪ್ರಾರಂಭಿಸುವ ಮೂಲಕ ಇತಿಹಾಸ ನಿರ್ಮಿಸಿದ್ದಾರೆ ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ಹೇಳಿದ್ದಾರೆ. ಧಾರವಾಡ ಜಿಲ್ಲೆ ಅಣ್ಣಿಗೇರಿಯಲ್ಲಿ ನೂತನವಾಗಿ ನಿರ್ಮಿಸಿದ ಇಂದಿರಾ ಕ್ಯಾಂಟೀನ್ ಲೋಕಾರ್ಪಣೆ ಹಾಗೂ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಇಂದಿರಾ ಕ್ಯಾಂಟಿನ್‌ನಲ್ಲಿ ಸರ್ಕಾರ ನಿಗದಿಪಡಿಸಿದ ದರದಲ್ಲಿ ಸಾರ್ವಜನಿಕರಿಗೆ ಉತ್ತಮ ಊಟ ಸಿಗುವಂತೆ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.

<><*<><>*><>

ಯಾದಗಿರಿ ಜಿಲ್ಲೆಯ ಅರ್ಹ ಪಡಿತರ ಚೀಟಿದಾರರು ಕಳೆದ ಆರು ತಿಂಗಳಿಂದ ಪಡಿತರ ಆಹಾರಧಾನ್ಯ ಪಡೆಯದೇ ಇರುವ ಬಗ್ಗೆ ಪರಿಶೀಲನೆ ನಡೆಸುವಂತೆ ಯಾದಗಿರಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮನೋಜ್ ಜೈನ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಯಾದಗಿರಿಯಲ್ಲಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಕಳೆದ ಆರು ತಿಂಗಳಿಂದ ಸುಮಾರು ಹತ್ತು ಸಾವಿರಕ್ಕೂ ಹೆಚ್ಚು ಪಡಿತರ ಚೀಟಿದಾರರು ಪಡಿತರ ಆಹಾರಧಾನ್ಯ ಪಡೆದಿಲ್ಲ ಎಂದು ತಿಳಿಸಿದ್ದಾರೆ. ಈ ಕುರಿತು ಪರಿಶೀಲನೆ ನಡೆಸಿ ಆಯಾ ನ್ಯಾಯ ಬೆಲೆ ಅಂಗಡಿ, ಗ್ರಾಮ ಪಂಚಾಯಿತಿವಾರು ಸಂಬಂಧಿಸಿದವರ ಪಟ್ಟಿ

ಪ್ರಚುರಪಡಿಸಿ, ಪಡಿತರ ಆಹಾರಧಾನ್ಯ ಪಡೆಯುವಂತೆ ಎಚ್ಚರಿಕೆ ನೀಡಬೇಕು ಎಂದು ಸೂಚಿಸಿದ್ದಾರೆ. ಪಡಿತರ ಪಡೆಯಲು ವಿಫಲವಾದಲ್ಲಿ ಅಂಥವರ ರೇಷನ್ ಕಾರ್ಡ್ ಅಮಾನತು ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><*<><>*><>

ಚಿಕ್ಕೋಡಿ ಹಾಗೂ ಬೆಳಗಾವಿ ಶೈಕ್ಷಣಿಕ ಜಿಲ್ಲೆಗಳ ಶಾಲೆ ಮತ್ತು ಕಾಲೇಜುಗಳ ಮೂಲಸೌಕರ್ಯ ಅಭಿವೃದ್ಧಿಗೆ ಪ್ರತಿವರ್ಷ ಲೋಕೋಪಯೋಗಿ ಇಲಾಖೆಯಿಂದ ಪ್ರತ್ಯೇಕವಾಗಿ ಐದು ಕೋಟಿ ರೂಪಾಯಿ ಅನುದಾನ ನೀಡಲಾಗುವುದು ಎಂದು ಲೋಕೋಪಯೋಗಿ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಭರವಸೆ ನೀಡಿದ್ದಾರೆ. ಬೆಳಗಾವಿಯಲ್ಲಿ ಮಾತನಾಡಿದ ಅವರು, ಬಡವರ ಮಕ್ಕಳಿಗೆ ಉತ್ತಮ ಶಿಕ್ಷಣ ಒದಗಿಸಬೇಕಾದರೆ ಉತ್ತಮ ಮೂಲ ಸೌಕರ್ಯ ಒದಗಿಸುವುದು ಸರಕಾರದ ಕರ್ತವ್ಯವಾಗಿದೆ ಎಂದು ಹೇಳಿದ್ದಾರೆ.  ಈ ಬಾರಿಯ ಕೆ-ಸಿಇಟಿ ಪರೀಕ್ಷೆಯಲ್ಲಿ ಜಿಲ್ಲೆಯ ಸರಕಾರಿ ಶಾಲೆಯ ಮಕ್ಕಳು ಉತ್ತಮ ಸಾಧನೆ ಮಾಡಿರುವ ವಿಶೇಷವಾಗಿದೆ ಎಂದು ಅವರು ಸಂತಸ ವ್ಯಕ್ತಪಡಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>